**<u>ಅಸಲು ದಾವಾ ಸಂಖ್ಯೆಃ -101/2021</u>** **ಡಿ.ಡಬ್ಲ್ಯೂ:-1**

ದಿನಾಂಕಃ **05-11-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ವಾದಿ ಪರ ವಕೀಲರಿಂದ :-</u>

ವಾದಿ ಗೊತ್ತು. ವಾದಿ ನನ್ನ ಹೆಂಡತಿಯ ಅಕ್ಕ. ನನ್ನ ಹೆಂಡತಿಯ ತಂದೆ ತಾಯಿಯ ಹೆಸರು ಲಕ್ಷ್ಮಮ್ಮ ಮತ್ತು ಮಾಯಪ್ಪ. ಲಕ್ಷ್ಮಮ್ಮ ಮತ್ತು ಮಾಯಪ್ಪನಿಗೆ ವಾದಿ ಮತ್ತು 1 ನೇ ಪ್ರತಿವಾದಿ ಇಬ್ಬರೂ ಮಾತ್ರ ಮಕ್ಕಳು ಎಂದರೆ ಸರಿ. ದಾವಾ ಆಸ್ತಿಯು ಮೂಲತಃ ಮಾಯಪ್ಪನ ತಂದೆಯಾದ ಬಸಪ್ಪನಿಗೆ ಸೇರಿದ್ದು. ಬಸಪ್ಪ ತೀರಿಕೊಂಡ ನಂತರ ಮಾಯಪ್ಪ ತೀರಿಕೊಂಡ ನಂತರ ಲಕ್ಷ್ಮಮ್ಮನ ಹೆಸರಿಗೆ ಬಂದಿರುತ್ತದೆ. ದಾವಾ ಆಸ್ತಿಯು ಲಕ್ಷ್ಮಮ್ಮನ ಪಿತ್ರಾರ್ಜಿತ ಆಸ್ತಿ ಎಂದರೆ ಸರಿ. ವಾದಿ ಮತ್ತು 1 ನೇ ಪ್ರತಿವಾದಿಗೆ ದಾವಾ ಆಸ್ತಿಯಲ್ಲಿ ಸಮಾನವಾದ ಭಾಗಾಂಶದ ಹಕ್ಕು ಮತ್ತು ಹಿತಾಸಕ್ತಿ ಇದೆ ಎಂದರೆ ಸರಿಯಲ್ಲ. ವಾದಿಯನ್ನು ದತ್ತುಕೊಟ್ಟಿರುವ ಬಗ್ಗೆ ಯಾವುದೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ. ವಾದಿಯು ನ್ಯಾಯಾಲಯಕ್ಕೆ ಹಾಜರುಪಡಿಸಿರುವ ಶಾಲಾ ದಾಖಲಾತಿಗಳಲ್ಲಿ ಅವರ ತಂದೆ ತಾಯಿಯ ಹೆಸರು ಲಕ್ಷ್ಮಮ್ಮ ಮತ್ತು ಮಾಯಪ್ಪ ಎಂದು ನಮೂದಾಗಿದೆ ಎಂದರೆ ನನಗೆ ಗೊತ್ತಿಲ್ಲ. ದಿಃ **01-09-2017** ರ ಮರಣ ಶಾಸನವನ್ನು ನೋಂದಣಿ ಕಚೇರಿಯಲ್ಲಿ ನೋಂದಣಿ ಮಾಡಿಸುವ ಸಮಯದಲ್ಲಿ ನಾನು ಹೋಗಿರುವುದಿಲ್ಲ. ಲಕ್ಷ್ಮಮ್ಮನ ಜೀವಿತಾವಧಿಯಲ್ಲಿ ಮಂಜುನಾಥ ದತ್ತು ತಾಯಿ ಹಳದಮ್ಮ ಎಂಬುವವರಿಗೆ ಲಕ್ಷ್ಮಮ್ಮ, ವಾದಿ ಮತ್ತು **1** ನೇ ಪ್ರತಿವಾದಿ ಜಂಟಿಯಾಗಿ ಕ್ರಯದ ಕರಾರು ಪತ್ರವನ್ನು ಬರೆದುಕೊಟ್ಟಿದ್ದರು ಎಂದರೆ ಸರಿ. ಸದರಿ ಕ್ರಯದ ಕರಾರು ಪತ್ರಕ್ಕೆ ನಾನು ಸಾಕ್ಷಿಯಾಗಿ ಸಹಿ ಮಾಡಿದ್ದೇನೆ ಎಂದರೆ ಸರಿ. ದಾವಾ ಆಸ್ತಿಯು ಲಕ್ಷ್ಮಮ್ಮನ ಪಿತ್ರಾರ್ಜಿತ ಆಸ್ತಿ ಆಗಿದ್ದರಿಂದ ವಾದಿ ಮತ್ತು **1** ನೇ ಪ್ರತಿವಾದಿಗೆ ಸಮಾನವಾದ ಭಾಗಾಂಶದ ಹಕ್ಕು ಮತ್ತು

ಹಿತಾಸಕ್ತಿ ಇದುದ್ದರಿಂದ ಲಕ್ಷ್ಮಮ್ಮನಿಗೆ ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಮರಣ ಶಾಸನವನ್ನು ಬರೆದುಕೊಡುವ ಹಕ್ಕು ಇರಲಿಲ್ಲ ಎಂದರೆ ಸರಿಯಲ್ಲ. ವಾದಿಗೆ ದಾವಾ ಆಸ್ತಿಯಲ್ಲಿರುವ ಭಾಗಾಂಶವನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ಪ್ರತಿವಾದ ಪತ್ರವನ್ನು ಸಲ್ಲಿಸಿ ಮತ್ತು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.